**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,ರವರ ನ್ಯಾಯಾಲಯ, ಕಡೂರು.</u>**

**<u>ಸಿ.ಸಿ. ಸಂಖ್ಯೆ.836/2023</u>**

<u>ಪಿರ್ಯಾದುದಾರರು</u> : ಸರ್ಕಾರದ ಪರವಾಗಿ ಕಡೂರು ಪೊಲೀಸರಿಂದ

-ವಿರುದ್ದ-

<u>ಆರೋಪಿ</u> : ಮಲ್ಲಪ್ಪ ರಾಚಣ್ಣನವರ್ ಬಿನ್ ರಾಮಪ್ಪ, 55 ವರ್ಷಗಳು, ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕ, ಬಿಲ್ಲೆ ಸಂಖ್ಯೆಃ 344, ಕಡೂರು ಡಿಪೋ, ಸ್ವಂತ ಊರು : ಮಧುರಕಂಡಿ ಗ್ರಾಮ, ಜಮಕಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.

**<u>-ಃ ಆ ಪಾ ದ ನೆಃ-</u>**

ದಿನಾಂಕ 14.10.2022 ರಂದು ಮಧ್ಯಾಹ್ನ 3-25 ಗಂಟೆ ಸಮಯದಲ್ಲಿ ಕಡೂರು ಪೊಲೀಸ್ ಠಾಣಾ ವ್ಯಾಪ್ತಿಯ ಕಡೂರು ಪಟ್ಟಣದ ದೀಕ್ಷಾ ಶಾಲೆಯ ಪಕ್ಕದಲ್ಲಿರುವ ತೆಂಗಿನ ತೋಟದ ಮುಂದೆ ಹಾದು ಹೋಗಿರುವ ಎನ್.ಹೆಚ್.206 ಟಾರು ರಸ್ತೆಯ ಎಡಬದಿಯಲ್ಲಿ ಚಾಸಾ-2 ಕುಮಾರನಾಯ್ಕರವರು ತಮ್ಮ ಬಾಬ್ತು ಕೆಎ 18 ಇಡಿ 8613 ರ ಮೋಟಾರು ಸೈಕಲ್ ನಲ್ಲಿ ಕಡೂರು ಕಡೆಯಿಂದ ಬೀರನಹಳ್ಳಿ ಕಡೆಗೆ ಹೋಗುತ್ತಿರುವಾಗ, ಆರೋಪಿಯಾದ ನೀವು ಕೆ.ಎಸ್.ಆರ್.ಟಿ.ಸಿ. ಬಸ್ ಸಂಖ್ಯೆಃ ಕೆಎ 57-ಎಫ್-2775 ನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಹಾಗೂ ನಿರ್ಲಕ್ಷ್ಯತನದಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರು ಚಾಲನೆ ಮಾಡುತ್ತಿದ್ದ ಮೋಟಾರು ಸೈಕಲ್ ಗೆ ಡಿಕ್ಕಿ ಹೊಡೆಸಿರುತ್ತೀರಿ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆಯ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಕೆ.ಎಸ್.ಆರ್.ಟಿ.ಸಿ. ಬಸ್ ಸಂಖ್ಯೆಃ ಕೆಎ 57 ಎಫ್-2775 ನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಹಾಗೂ ನಿರ್ಲಕ್ಷ್ಯತನದಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರು ಚಾಲನೆ ಮಾಡುತ್ತಿದ್ದ ಮೋಟಾರು ಸೈಕಲ್ ಗೆ ಡಿಕ್ಕಿಪಡಿಸಿದ ಪರಿಣಾಮ, ಚಾಸಾ-2 ರವರು ಬೈಕ್ ಸಮೇತ ರಸ್ತೆಗೆ ಬಿದ್ದು ಅವರ ಬಲಕೈಗೆ ಮತ್ತು ತಲೆಯ ಹಿಂಭಾಗಕ್ಕೆ ತೀವ್ರ ಸ್ವರೂಪದ ಗಾಯಗಳಾಗಿರುತ್ತದೆ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆಯ ಕಲಂ 338 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

ಉಃ ತಿಳಿಯಿತು.

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉಃ ನಾನು ಯಾವುದೇ ತಪ್ಪು ಮಾಡಿರುವುದಿಲ್ಲ, ವಿಚಾರಣೆಯಾಗಬೇಕು.

ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ದಿನಾಂಕಃ 5 ನೇ ಅಕ್ಟೋಬರ್ 2023.

ಸಹಿ-

**(ರಾಮ್ ಪ್ರಶಾಂತ್ ಎಂ.ಎನ್.),**
**ಪ್ರಧಾನ ಪ್ರದನ್ಯಾದಂ., ಕಡೂರು.**